# ಐತಿಹಾಸಿಕ ದಾಖಲೆ, ಛಾಯಾಚಿತ್ರಗಳ ಪ್ರದರ್ಶನ

**ಗದಗ:** ಕರ್ನಾಟಕ ಪತ್ರಗಾರ ಇಲಾಖೆ ಹಾಗೂ ಕೆ.ಎಚ್.ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜು ಹುಲಕೋಟಿಯ ಸಂಯುಕ್ತಾಶ್ರಯದಲ್ಲಿ ಹುಲಕೋಟಿ ಕೆ.ಎಚ್.ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರದಿಂದ ಆರಂಭವಾದ ಕರ್ನಾಟಕ ಏಕೀಕರಣ ಚಳುವಳಿ ಐತಿಹಾಸಿಕ ದಾಖಲೆಗಳ ಮತ್ತು ಛಾಯಾಚಿತ್ರಗಳ ಪ್ರದರ್ಶನಕ್ಕೆ ವಿಪ ಸಭಾಪತಿ ಬಸವರಾಜ ಹೊರಟ್ಟಿ ಚಾಲನೆ ನೀಡಿದರು.

ಛಾಯಾಚಿತ್ರ ಪ್ರದರ್ಶನದಲ್ಲಿ ಕರ್ನಾಟಕದ ಬಗ್ಗೆ ರಾಜ ಪ್ರಮುಖರ ಅಭಿಪ್ರಾಯ, ಪ್ರಾಂತ್ಯ ರಚನೆಗೆ ನೆಹರೂ ಬೆಂಬಲ, ಬೊಂಬಾಯಿ ಶಾಸನ ಸಭೆಯಲ್ಲಿ ಕನ್ನಡ ಸದಸ್ಯರ ಗೈರು ಹಾಜರಿ, ಉಳುವವನಿಗೆ ಭೂಮಿ ಕೊಡಿಸುವ ಮಸೂದೆ ಪರೀಶಿಲನೆ, ಕರ್ನಾಟಕ ಕೀರ್ತಿ ಸಂಭ, ಬೊಂಬಾಯಿ ಕನ್ನಡ ಶಾಲೆಯ ನೂತನ ಕಟ್ಟಡ, ಸರದಾರ ವೀರನಗೌಡರು ನಾಗಮ್ಮನವರಿಗೆ ಬೆಳಗಾವಿ ಸೆಂಟ್ರಲ್ ಜೈಲಿನಿಂದ ಬರೆದ ಪತ್ರ, ಕೋರ್ಟ್‌ಗಳಲ್ಲಿ ಕನ್ನಡ, ಕರ್ನಾಟಕ ವಿದ್ಯಾವರ್ಧಕ ಸಂಘ, ಧಾರವಾಡ, ನವಭಾರತ -ಕರ್ನಾಟಕ ಪ್ರಾಂತ್ಯ ರಚನೆ, ಕನ್ನಡದ ಉತ್ಸವ, ಬಿಜಾಪೂರ ನ್ಯಾಯಾಲಯಕ್ಕೆ ಬಾಬಾಸಾಹೇಬರ ಅವಿಸ್ಮರಣೀಯ ಭೇಟಿ ಸೇರಿ ಅನೇಕ ವಿಷಯ ಪ್ರದರ್ಶಿಸಲಾಗಿದೆ.

ಮಾಜಿ ಶಾಸಕರಾದ ಡಿ.ಆರ್.ಪಾಟೀಲ, ಪತ್ರಗಾರ ಇಲಾಖೆ ನಿರ್ದೇಶಕ ಗವಿಸಿದ್ದಯ್ಯ, ಹುಲಕೋಟಿಯ ಕೆ.ಎಚ್.ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರಾದ ಶಿವಪ್ಪ ಕುರಿ, ಧಾರವಾಡ ಪ್ರಾದೇಶಿಕ ಪತ್ರಾಗಾರ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಿ ಮಂಜುಳಾ ಯಲಿಗಾರ, ಗದಗ ತಹಶೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಎ.ರಡ್ಡೇರ, ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಪ್ರೊ.ಡಾ.ಅಪ್ಪಣ್ಣ ಹಂಚೆ, ಗಣ್ಯರಾದ ಜೆ.ಕೆ. ಜಮಾದಾರ ಇದ್ದರು.



ಪ್ರಜಾವಾಣಿ

## ವಿಚಾರ ಸಂಕಿರಣ: ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ

# ಏಕೀಕರಣ ಹೋರಾಟದಲ್ಲಿ ಜಿಲ್ಲೆಯ ಪಾತ್ರ ಹಿರಿದು

ಪ್ರಜಾವಾಣಿ ವಾರ್ತೆ

**ಗದಗ:** ಮಕ್ಕಳಿಗೆ ಶಿಕ್ಷಣದ ಜತೆಗೆ ಸಂಸ್ಕಾರ ಅತ್ಯವಶ್ಯಕ. ಸಂಸ್ಕಾರವಂತ ಯುವಕರ ಕೊರತೆ ಸಮಾಜವನ್ನು ಕಾಡುತ್ತಿದ್ದು, ಮಕ್ಕಳಿಗೆ ಪಠ್ಯಪುಸ್ತಕಗಳ ಬೋಧನೆ ಜತೆಗೆ ನೈತಿಕ ಶಿಕ್ಷಣ ಬೋಧಿಸಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಶಿಕ್ಷಕರಿಗೆ ಸಲಹೆ ನೀಡಿದರು.

ಹುಲಕೋಟಿಯ ಸ್ವಾಮಿ ವಿವೇಕಾನಂದ ಪಿಯು ಕಾಲೇಜಿನಲ್ಲಿ ಕರ್ನಾಟಕ ಪತ್ರಗಾರ ಇಲಾಖೆ, ಪ್ರಾದೇಶಿಕ ಪತ್ರಗಾರ ಇಲಾಖೆ ಧಾರವಾಡ ಹಾಗೂ ಹುಲಕೋಟಿಯ ಕೆ.ಎಚ್.ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಯೋಗದಲ್ಲಿ ಶನಿವಾರ ನಡೆದ ಕರ್ನಾಟಕ ಏಕೀಕರಣ ಚಳವಳಿ ಹಾಗೂ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕ ಏಕೀಕರಣ ಚಳವಳಿಯಲ್ಲಿ ಅನೇಕ ಮಹನೀಯರು ಹೋರಾಟ ಮಾಡಿದ್ದಾರೆ. ಅದರಲ್ಲಿ ಗದಗ ಜಿಲ್ಲೆಯ ಪಾತ್ರ ಪ್ರಮುಖವಾಗಿದೆ. ಪತ್ರಗಾರ ಇಲಾಖೆಯು ಮಹತ್ವದ ದಾಖಲೆಗಳನ್ನು ಪ್ರದರ್ಶನಕ್ಕೆ ಇಟ್ಟಿದೆ. ವಿದ್ಯಾರ್ಥಿಗಳು ದಾಖಲೆಗಳ ಬಗ್ಗೆ ಅರಿತುಕೊಂಡು ಜ್ಞಾನ ಬೆಳೆಸಿಕೊಳ್ಳುವ ಮೂಲಕ ಸದೃಢ ರಾಷ್ಟ್ರ ನಿರ್ಮಾಣಕ್ಕೆ ಮುಂದಾಗಬೇಕು ಎಂದು ತಿಳಿಸಿದರು.

ಪತ್ರಗಾರ ಇಲಾಖೆ ನಿರ್ದೇಶಕ ಗವಿಸಿದ್ದಯ್ಯ ಪ್ರಾಸ್ತಾವಿಕವಾಗಿ ಮಾತನಾಡಿ, ಸಮಾಜದ ಗಣ್ಯ ವ್ಯಕ್ತಿ, ಮತ ಮಾನ್ಯಗಳಲ್ಲಿ ಹಾಗೂ ರಾಜ್ಯದ ಇತರೆ ಭಾಗದಲ್ಲಿ ಸಿಗುವ ಮಹತ್ವದ ದಾಖಲೆಗಳನ್ನು ಸಂಗ್ರಹಿಸಿ, ಸಂರಕ್ಷಿಸುವ ಕೆಲಸವನ್ನು ಇಲಾಖೆ ಮಾಡುತ್ತಿದೆ. ಮೈಸೂರು ಪ್ರಾಂತ್ಯ, ಮುಂಬೈ ಪ್ರಾಂತ್ಯ, ಹೈದರಾಬಾದ್ ಪ್ರಾಂತ್ಯಕ್ಕೆ ಸಂಬಂಧಿಸಿದ ದಾಖಲೆಗಳು ನಮ್ಮ ಬಳಿ ಇವೆ. 1.40 ಲಕ್ಷಕ್ಕೂ ಅಧಿಕ ದಾಖಲೆಗಳನ್ನು ರಾಜ್ಯ ಪತ್ರಗಾರ ಇಲಾಖೆ ಸಂರಕ್ಷಿಸುತ್ತಿದೆ. ಸ್ವಾತಂತ್ರ್ಯ ನಂತರ, ಅದಕ್ಕೂ ಪೂರ್ವದ ಮಹತ್ವದ ದಾಖಲೆಗಳನ್ನು ಜನರು ಅವಲೋಕಿಸಿ ಜ್ಞಾನ ವೃದ್ಧಿಸಿಕೊಳ್ಳಬೇಕು ಎಂದರು.

ಗದಗ ತಹಶೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಎ.ರಡ್ಡೇರ, ಕೆ.ಎಚ್.ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಪ್ರಾಧ್ಯಾಪಕ ಅಪ್ಪಣ್ಣ ಹಂಜೆ, ಜೆ.ಕೆ.ಜಮಾದಾರ, ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾಲೇಜಿನ ಪ್ರಾಚಾರ್ಯ ಶಿವಪ್ಪ ಕುರಿ ಸ್ವಾಗತಿಸಿದರು, ಧಾರವಾಡ ಪ್ರಾದೇಶಿಕ ಪತ್ರಾಗಾರ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕಿ ಮಂಜುಳಾ ಯಲಿಗಾರ ವಂದಿಸಿದರು, ಬಾಹುಬಲಿ ಜೈನ ಕಾರ್ಯಕ್ರಮ ನಿರೂಪಿಸಿದರು.



ಗದಗ ತಾಲ್ಲೂಕಿನ ಹುಲಕೋಟಿ ಗ್ರಾಮದ ಸ್ವಾಮಿ ವಿವೇಕಾನಂದ ಪಿಯು ಕಾಲೇಜಿನಲ್ಲಿ ನಡೆದ ಕರ್ನಾಟಕ ಏಕೀಕರಣ ಚಳವಳಿ ಹಾಗೂ ವಿಚಾರ ಸಂಕಿರಣವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು

**ಏಕೀಕರಣ ಚಳವಳಿಯಲ್ಲಿ ಭಾಗವಹಿಸಿದ್ದ ಗದುಗಿನ ಮಹನೀಯರ ದಾಖಲೆಗಳನ್ನು ಜಾಲತಾಣಗಳಲ್ಲಿ ದಾಖಲೀಕರಿಸಿ ಇತಿಹಾಸವನ್ನು ಸಮಾಜಕ್ಕೆ ಹೇಳುವ ಕಾರ್ಯವಾಗಬೇಕು**

**ಡಿ.ಆರ್.ಪಾಟೀಲ,** ಮಾಜಿ ಶಾಸಕ

### ‘ನಿಸ್ವಾರ್ಥ ಭಾವನೆ ಬೆಳೆಸಿಕೊಳ್ಳಿ’

‘ವೈಚಾರಿಕತೆಯಲ್ಲಿ ಭಿನ್ನಾಭಿಪ್ರಾಯ ಇರಲಿ. ಗುರಿ ಸಾಧನೆಗೆ ಯಾರನ್ನೂ ವೈಯಕ್ತಿಕವಾಗಿ ದ್ವೇಷಿಸಬಾರದು. ಬೇರೆಯವರ ಹೆಸರಿಗೆ ಚ್ಯುತಿ ಬಾರದಂತೆ ನಡೆದುಕೊಳ್ಳಬೇಕು. ವಿದ್ಯಾರ್ಥಿಗಳು ನಿಸ್ವಾರ್ಥ ಭಾವನೆ ಬೆಳೆಸಿಕೊಳ್ಳಬೇಕು. ಪಠ್ಯಪುಸ್ತಕಗಳ ಬೋಧನೆಯಿಂದ ಉದ್ಯೋಗ ದೊರಕಬಹುದು. ಆದರೆ, ಇಂದಿನ ವಿದ್ಯಾರ್ಥಿಗಳಿಗೆ ನೈತಿಕ ಶಿಕ್ಷಣದ ಅವಶ್ಯಕತೆ ಇದ್ದು, ಅವರಿಗೆ ಮೌಲ್ಯಗಳ ಕುರಿತು ತಿಳಿಹೇಳುವ ಕಾರ್ಯವಾಗಿಬೇಕಾಗಿದೆ’ ಎಂದು ಮಾಜಿ ಶಾಸಕ ಡಿ.ಆರ್.ಪಾಟೀಲ ತಿಳಿಸಿದರು.



ಗದಗ ಹುಲಕೋಟಿಯ ಕೆ.ಎಚ್.ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ಆರಂಭಗೊಂಡ ಮೂರು ದಿನಗಳ ಕರ್ನಾಟಕ ಏಕೀಕರಣ ಚಳವಳಿ ಐತಿಹಾಸಿಕ ದಾಖಲೆಗಳು ಮತ್ತು ಛಾಯಾಚಿತ್ರಗಳ ಪ್ರದರ್ಶನವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು

# ಐತಿಹಾಸಿಕ ಛಾಯಾಚಿತ್ರ ಪ್ರದರ್ಶನ

ಪ್ರಜಾವಾಣಿ ವಾರ್ತೆ

**ಗದಗ:** ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ಆರಂಭಗೊಂಡ ಮೂರು ದಿನಗಳ ಕರ್ನಾಟಕ ಏಕೀಕರಣ ಚಳವಳಿ ಐತಿಹಾಸಿಕ ದಾಖಲೆಗಳು ಮತ್ತು ಛಾಯಾಚಿತ್ರಗಳ ಪ್ರದರ್ಶನವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.

ಛಾಯಾಚಿತ್ರ ಪ್ರದರ್ಶನದಲ್ಲಿ ಕರ್ನಾಟಕದ ಬಗ್ಗೆ ರಾಜ್ಯದ ಪ್ರಮುಖರ ಅಭಿಪ್ರಾಯ, ಕರ್ನಾಟಕ ಪ್ರಾಂತ್ಯ ರಚನೆಗೆ ನೆಹರೂ ಅವರ ಬೆಂಬಲ, ಉಳುವವನಿಗೆ ಭೂಮಿ ಕೊಡಿಸುವ ಮಸೂದೆ ಪರೀಶಿಲನೆ, ಕರ್ನಾಟಕ ಕೀರ್ತಿ ಸ್ತಂಭ, ನವಭಾರತ- ಶಾಂತಿ ಮಾರ್ಗದಿಂದಲೇ ಏಕೀಕರಣ ಸಾಧನೆಯಾಗಬೇಕು, ಸರ್ದಾರ ವೀರನಗೌಡರು ನಾಗಮ್ಮನವರಿಗೆ ಬೆಳಗಾವಿ ಸೆಂಟ್ರಲ್ ಜೈಲಿನಿಂದ ಬರೆದ ಪತ್ರ, ಕೋರ್ಟ್‌ಗಳಲ್ಲಿ ಕನ್ನಡ, ಕರ್ನಾಟಕ ವಿದ್ಯಾವರ್ಧಕ ಸಂಘ, ಧಾರವಾಡ, ನವಭಾರತ -ಕರ್ನಾಟಕ ಪ್ರಾಂತ್ಯ ರಚನೆ, ಕನ್ನಡದ ಉತ್ಸವ, ಬಿಜಾಪೂರ ನ್ಯಾಯಾಲಕ್ಕೆ ಬಾಬಾಸಾಹೇಬರ ಅವಿಸ್ಮರಣೀಯ ಭೇಟಿ ಸೇರಿದಂತೆ ಇನ್ನೂ ಅನೇಕ ಐತಿಹಾಸಿಕ ಛಾಯಾಚಿತ್ರಗಳನ್ನು ಪ್ರದರ್ಶಿಸಲಾಗಿದೆ.

# ಗದಗ

## 100ಕ್ಕೆ ನೂರರಷ್ಟು ಫಲಿತಾಂಶ

**ಮುಂಡರಗಿ;** ಇಲ್ಲಿಯ ಶ್ರೀಜ.ಅ.ವಿ.ಸಮಿತಿಯ ಜ.ಅ.ಶಿಕ್ಷಣ ಮಹಾವಿದ್ಯಾಲಯದಲ್ಲಿ 2022-23ನೇ ಸಾಲಿನಲ್ಲಿ ನಡೆದ 4ನೇ ಸೇಮಿಸ್ಟರ್ ಪರೀಕ್ಷೆ ಫಲಿತಾಂಶ ಪ್ರಕಟಗೊಂಡಿದ್ದು ಮಹಾವಿದ್ಯಾಲಯ 100ಕ್ಕೆ ನೂರರಷ್ಟು ಫಲಿತಾಂಶ ಹೊಂದಿದೆ ಎಂದು ಪ್ರಾಚಾರ್ಯ ಎಂ.ವಿ.ಕುಲಕರ್ಣಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿದ್ದು, ಪ್ರಶಿಕ್ಷಣಾರ್ಥಿಗಳಾದ ಬೇಬಿ ವಾಲಿಕಾರ ಶೇ.92.83 ಅಂಕಗಳಿಸಿ ಕಾಲೇಜಿಗೆ ಪ್ರಥಮ, ಪ್ರಶಾಂತಿನಿ ಜುಪ್ಪಣ್ಣವರ ಶೇ.92.16 ಅಂಕ ಗಳಿಸಿ ದ್ವಿತೀಯ ಹಾಗೂ ಅಮರೇಶ ವೀರಾಪುರದ ಶೇ.91.84 ಅಂಕ ಗಳಿಸಿ ತೃತೀಯ ಸ್ಥಾನ ಪಡೆದಿದ್ದಾರೆ.

ಆಂಜನೇಯ ಪಾಟೀಲ,ಅನಿಲ ಕೆ., ಕೆ.ಆರ್. ಭಾವನಾ ಶೇ.91 ಮತ್ತು ಪರುಶರಾಮ ಮಲ್ಲಿಕೇರಿ ಶೇ.90 ಅಂಕ ಗಳಿಸಿದ್ದಾರೆ. ಪ್ರಶಿಕ್ಷಣಾರ್ಥಿಗಳಿಗೆ ಜಗದ್ಗುರು ನಾಡೋಜ ಡಾ.ಅನ್ನದಾನೀಶ್ವರ ಮಹಾಶಿವಯೋಗಿಗಳು ಆಶೀರ್ವದಿಸಿದ್ದಾರೆ.



# ಸಾಧನೆಗೆ ಸತತ ಪ್ರಯತ್ನ ಅಗತ್ಯ

## ಕರ್ನಾಟಕ ಏಕೀಕರಣ ವಿಚಾರ ಸಂಕಿರಣ | ವಿಪ ಸಭಾಪತಿ ಹೊರಟ್ಟಿ ಅಭಿಮತ

**ಗದಗ:** ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ಅತೀ ಅವಶ್ಯ. ಸಂಸ್ಕಾರವಂತ ಯುವಕರ ಕೊರತೆ ಸಮಾಜವನ್ನು ಕಾಡುತ್ತಿದ್ದು ಮಕ್ಕಳಿಗೆ ಪಠ್ಯ ಪುಸ್ತಕಗಳ ಬೋಧನೆಯೊಂದಿಗೆ ನೈತಿಕ ಶಿಕ್ಷಣ ನೀಡಬೇಕು ಎಂದು ವಿಪ ಸಭಾಪತಿ ಬಸವರಾಜ ಹೊರಟ್ಟಿ ಶಿಕ್ಷಕರಿಗೆ ಸಲಹೆ ನೀಡಿದರು.

ಕರ್ನಾಟಕ ಪತ್ರಗಾರ ಇಲಾಖೆ, ಪ್ರಾದೇಶಿಕ ಪತ್ರಗಾರ ಇಲಾಖೆ ಧಾರವಾಡ ಹಾಗೂ ಕೆ.ಎಚ್ .ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜು ಹುಲಕೋಟಿಯ ಸಂಯುಕ್ತಾಶ್ರಯದಲ್ಲಿ ಹುಲಕೋಟಿ ಸ್ವಾಮಿ ವಿವೇಕಾನಂದ ಪಿಯು ಕಾಲೇಜಿನಲ್ಲಿ ಶನಿವಾರ ನಡೆದ ಕರ್ನಾಟಕ ಏಕೀಕರಣ ಚಳುವಳಿ ವಿಚಾರ ಸಂಕೀರಣ ಉದ್ಘಾಟಿಸಿ ಮತನಾಡಿದರು.

ತಂದೆ ತಾಯಿ ತಮ್ಮ ಸರ್ವಸ್ವತ್ಯಜಿಸಿ ಮಕ್ಕಳ ಭವಿಷ್ಯ ರೂಪಿಸಲು ಬದುಕಿನ ಬಂಡಿ ಸಾಗಿಸುತ್ತಿರುತ್ತಾರೆ. ಅವರ ಆಶಯಕ್ಕೆ ಧಕ್ಕೆ ಬಾರದಂತೆ ಮಕ್ಕಳು ತಮ್ಮ ಭವಿಷ್ಯ ರೂಪಿಸಿಕೊಂಡು ಹೆತ್ತವರ ಕೀರ್ತಿ ಹೆಚ್ಚಿಸಬೇಕು. ಕಳೆದುಕೊಂಡ ನಂತರ ಹುಡುಕುವುದು ಕಷ್ಟ, ಅದಕ್ಕೂ ಮುನ್ನ ಎಚ್ಚರ ವಹಿಸಿ.ಯಶಸ್ಸು ಸಾಧಿಸಲು ಸತತ ಪ್ರಯತ್ನದ ಅಗತ್ಯವಿದೆ ಎಂದರು.

ಕರ್ನಾಟಕ ಏಕೀಕರಣ ಚಳುವಳಿಯಲ್ಲಿ ಅನೇಕ ಮಹನೀಯರು ಹೋರಾಟ ಮಾಡಿದ್ದಾರೆ. ಅದರಲ್ಲಿ ಜಿಲ್ಲೆಯ ಪಾತ್ರ ಅಧಿಕ. ಪತ್ರಗಾರ ಇಲಾಖೆಯು ಮಹತ್ವದ ದಾಖಲೆಗಳನ್ನು ಪ್ರದರ್ಶನಕ್ಕಿರಿಸಿದ್ದು ಆ ದಾಖಲೆಗಳ ಬಗ್ಗೆ ಅರಿತು ಜ್ಞಾನ ಬೆಳೆಸಿಕೊಂಡು ಸದೃಢ ರಾಷ್ಟ್ರ ನಿರ್ಮಾಣಕ್ಕೆ ಮುಂದಾಗಬೇಕೆಂದರು.



### 1.40 ಲಕ್ಷ ದಾಖಲೆಗಳ ಸಂರಕ್ಷಣೆ

ಮೈಸೂರು ಪ್ರಾಂತ, ಮುಂಬೈ ಪ್ರಾಂತ, ಹೈದ್ರಾಬಾದ್ ಪ್ರಾಂತ್ಯಕ್ಕೆ ಸಂಬಂಧಿಸಿದ ದಾಖಲೆಗಳು ನಮ್ಮ ಬಳಿ ಇವೆ. 1.40 ಲಕ್ಷಕ್ಕೂ ಅಧಿಕ ದಾಖಲೆಗಳನ್ನು ರಾಜ್ಯ ಪತ್ರಗಾರ ಇಲಾಖೆ ಸಂರಕ್ಷಿಸುತ್ತಿದೆ ಎಂದು ಪತ್ರಗಾರ ಇಲಾಖೆ ನಿರ್ದೇಶಕ ಗವಿಸಿದ್ದಯ್ಯ ತಿಳಿಸಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ, ವೈಚಾರಿಕತೆಯಲ್ಲಿ ಭಿನ್ನಾಭಿಪ್ರಾಯಗಳಿರಲಿ ಆದರೆ, ವೈಯಕ್ತಿಕ ದ್ವೇಷಕ್ಕಾಗಿ ಬಳಕೆ ಸಲ್ಲ. ವಿದ್ಯಾರ್ಥಿಗಳು ನಿಸ್ವಾರ್ಥ ಭಾವನೆ ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು. ಉದ್ಯೋಗಕ್ಕೆ ಪಠ್ಯ ಪುಸ್ತಕ ಬೋಧನೆ ಅವಶ್ಯ. ಆದರೆ, ಪ್ರಸ್ತುತ ನೈತಿಕ ಶಿಕ್ಷಣದ ಅವಶ್ಯಕತೆ ಇದ್ದು ಬೋಧನೆಯೊಂದಿಗೆ ನೈತಿ ಮೌಲ್ಯದ ಅರಿವು ಮೂಡಿಸಬೇಕಿದೆ ಎಂದರು.

ಗದುಗಿನ ಮಹನೀಯರ ದಾಖಲೆಗಳನ್ನು ಜಾಲತಾಣಗಳಲ್ಲಿ ದಾಖಲೀಕರಿಸಿ ಕರ್ನಾಟಕ ಏಕೀಕರಣದ ಇತಿಹಾಸವನ್ನು ಸಮಾಜಕ್ಕೆ ಹೇಳುವ ಕಾರ್ಯವಾಗಬೇಕು ಎಂದರು.

ಗದಗ ತಹಶೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಎ.ರಡ್ಡೇರ, ಪ್ರೊ.ಡಾ.ಅಪ್ಪಣ್ಣ ಹಂಜೆ, ಜೆ.ಕೆ. ಜಮಾದಾರ ಇದ್ದರು.

ಪ್ರಾಚಾರ್ಯ ಶಿವಪ್ಪ ಕುರಿ ಸ್ವಾಗತಿಸಿದರು. ಧಾರವಾಡ ಪ್ರಾದೇಶಿಕ ಪತ್ರಾಗಾರ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕಿ ಮಂಜುಳಾ ಯಲಿಗಾರ ವಂದಿಸಿದರು. ಬಾಬಹುಬಲಿ ಜೈನರ್ ಕಾರ್ಯಕ್ರಮ ನಿರೂಪಿಸಿದರು. ಪಂ.ವೆಂಕಟೇಶ ಅಲಕೋಡ ಹಾಗೂ ಸಂಗಡಿಗರು ನಾಡಗೀತೆ ಪ್ರಸ್ತುತಪಡಿಸಿದರು.

# ನಿರಂತರ ಪ್ರಯತ್ನದಿಂದ ಯಶಸ್ಸು ಸಾಧ್ಯ

## ಮಕ್ಕಳಿಗೆ ಶಿಕ್ಷಣದ ಜತೆಗೆ ಸಂಸ್ಕಾರ ಅವಶ್ಯ। ಏಕೀಕರಣ ಚಳವಳಿಯಲ್ಲಿ ಜಿಲ್ಲೆಯ ಪಾತ್ರ ಮಹತ್ವದ್ದು



**ಗದಗ: ಹುಲಕೋಟಿಯಲ್ಲಿ ನಡೆದ ಕರ್ನಾಟಕ ಏಕೀಕರಣ ಚಳವಳಿ ಹಾಗೂ ವಿಚಾರ ಸಂಕಿರಣವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.**

■ **ಉದಯವಾಣಿ ಸಮಾಚಾರ**

**ಗದಗ:** ಮಕ್ಕಳಿಗೆ ಶಿಕ್ಷಣದ ಜತೆಗೆ ಸಂಸ್ಕಾರ ಬೆಳೆಸಿ. ಸಂಸ್ಕಾರವಂತ ಯುವಕರ ಕೊರತೆ ಸಮಾಜವನ್ನು ಕಾಡುತ್ತಿದ್ದು, ಮಕ್ಕಳಿಗೆ ಪಠ್ಯ ಪುಸ್ತಕಗಳ ಬೋಧನೆ ಜೊತೆಗೆ ನೈತಿಕ ಶಿಕ್ಷಣ ಬೋಧಿಸಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಶಿಕ್ಷಕರಿಗೆ ಸಲಹೆ ನೀಡಿದರು.

ತಾಲೂಕಿನ ಹುಲಕೋಟಿಯ ಸ್ವಾಮಿ ವಿವೇಕಾನಂದ ಪಿಯು ಕಾಲೇಜಿನಲ್ಲಿ ಕರ್ನಾಟಕ ಪತ್ರಾಗಾರ ಇಲಾಖೆ ಹಾಗೂ ಕೆ.ಎಚ್. ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜು ಆಶ್ರಯದಲ್ಲಿ ಶನಿವಾರ ನಡೆದ ಕರ್ನಾಟಕ ಏಕೀಕರಣ ಚಳವಳಿ ಹಾಗೂ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.

ತಂದೆ-ತಾಯಿ ತಮ್ಮ ಸರ್ವಸ್ವವನ್ನು ತ್ಯಜಿಸಿ ಮಕ್ಕಳ ಭವಿಷ್ಯ ರೂಪಿಸಲು ಬದುಕಿನ ಬಂಡಿ ದೂಡುತ್ತಾರೆ. ಅವರ ಆಶಯಕ್ಕೆ ಧಕ್ಕೆ ಬಾರದಂತೆ ಮಕ್ಕಳು ತಮ್ಮ ಭವಿಷ್ಯ ರೂಪಿಸಿಕೊಂಡು ಹೆತ್ತವರ ಹೆಸರು ತರಬೇಕು. ಕಳೆದುಕೊಂಡ ನಂತರ ಹುಡುಕುವುದು ಕಷ್ಟ ಅದಕ್ಕೂ ಮುನ್ನವೇ ಎಚ್ಚರ ವಹಿಸಿಕೊಳ್ಳಬೇಕು. ಸುಶಿಕ್ಷಿತರಾಗಿ ಉತ್ತಮ ಜೀವನ ತಮ್ಮದಾಗಿಸಿಕೊಳ್ಳಬೇಕು. ಯಶಸ್ಸು ಸಾಧಿಸಲು ಸತತ ಪ್ರಯತ್ನ ಅಗತ್ಯವಿದೆ. ಕರ್ನಾಟಕ ಏಕೀಕರಣ ಚಳವಳಿಯಲ್ಲಿ ಅನೇಕ ಮಹನೀಯರು ಹೋರಾಟ ಮಾಡಿದ್ದಾರೆ. ಅದರಲ್ಲಿ ಜಿಲ್ಲೆಯ ಪಾತ್ರ ಪ್ರಮುಖವಾಗಿದೆ. ಪತ್ರಾಗಾರ ಇಲಾಖೆ ಮಹತ್ವದ ದಾಖಲೆಗಳನ್ನು ಪ್ರದರ್ಶನಕ್ಕೆ ಇಟ್ಟಿದೆ. ವಿದ್ಯಾರ್ಥಿಗಳು ದಾಖಲೆಗಳ ಬಗ್ಗೆ ಅರಿತುಕೊಂಡು ಜ್ಞಾನ ಬೆಳೆಸಿಕೊಳ್ಳುವುದರ ಮೂಲಕ ಸದೃಢ ರಾಷ್ಟ್ರ ನಿರ್ಮಾಣಕ್ಕೆ ಮುಂದಾಗಬೇಕೆಂದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ವೈಚಾರಿಕತೆಯಲ್ಲಿ ಭಿನ್ನಾಭಿಪ್ರಾಯ ಇರಲಿ. ವೈಚಾರಿಕತೆಯನ್ನು ವೈಯಕ್ತಿಕ ದ್ವೇಷಕ್ಕಾಗಿ ಸಾಧಿಸಬಾರದು. ಗುರಿ ಸಾಧನೆಗೆ ಯಾರನ್ನೂ ವೈಯಕ್ತಿಕವಾಗಿ ದ್ವೇಷಿಸಬಾರದು. ಬೇರೊಬ್ಬರಿಗೆ ಚ್ಯುತಿ ಬಾರದಂತೆ ನಡೆದುಕೊಳ್ಳಬೇಕು. ವಿದ್ಯಾರ್ಥಿಗಳು ನಿಸ್ವಾರ್ಥ ಭಾವನೆ ಬೆಳೆಸಿಕೊಳ್ಳಬೇಕು. ಪಠ್ಯ ಪುಸ್ತಕಗಳ ಬೋಧನೆಯಿಂದ ಉದ್ಯೋಗ ದೊರಕಬಹುದು. ಆದರೆ, ಇಂದಿನ ವಿದ್ಯಾರ್ಥಿಗಳಿಗೆ ನೈತಿಕ ಶಿಕ್ಷಣದ ಅವಶ್ಯಕತೆ ಇದ್ದು, ಇದರ ಬೋಧನೆ ಮೂಲಕ ಮೌಲ್ಯಗಳ ಕುರಿತು ತಿಳಿ ಹೇಳುವ ಕಾರ್ಯವಾಗಬೇಕಾಗಿದೆ. ಕರ್ನಾಟಕ ಏಕೀಕರಣದಲ್ಲಿ ಗದುಗಿನ ಪಾತ್ರ ಮಹತ್ವದ್ದಾಗಿದೆ. ಏಕೀಕರಣ ಚಳವಳಿಯಲ್ಲಿ ಭಾಗವಹಿಸಿದ್ದ ಮಹನೀಯರ ದಾಖಲೆಗಳನ್ನು ಜಾಲತಾಣಗಳಲ್ಲಿ ದಾಖಲೀಕರಿಸಿ ಕರ್ನಾಟಕ ಏಕೀಕರಣದ ಇತಿಹಾಸವನ್ನು ಸಮಾಜಕ್ಕೆ ಹೇಳುವ ಕಾರ್ಯವಾಗಬೇಕೆಂದರು.

ಪತ್ರಾಗಾರ ಇಲಾಖೆ ನಿರ್ದೇಶಕ ಗವಿಸಿದ್ದಯ್ಯ ಪ್ರಾಸ್ತಾವಿಕ ಮಾತನಾಡಿದರು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಎ. ರಡ್ಡೇರ, ಪ್ರಾಧ್ಯಾಪಕ ಡಾ। ಅಪ್ಪಣ್ಣ ಹಂಜೆ, ಜೆ.ಕೆ. ಜಮಾದಾರ, ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು. ಕಾಲೇಜಿನ ಪ್ರಾಚಾರ್ಯ ಶಿವಪ್ಪ ಕುರಿ ಸ್ವಾಗತಿಸಿದರು.

## ಐತಿಹಾಸಿಕ ದಾಖಲೆ-ಛಾಯಾಚಿತ್ರಗಳ ಪ್ರದರ್ಶನ

■ **ಉದಯವಾಣಿ ಸಮಾಚಾರ**

**ಗದಗ:** ತಾಲೂಕಿನ ಹುಲಕೋಟಿಯ ಕೆ.ಎಚ್. ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕರ್ನಾಟಕ ಪತ್ರಾಗಾರ ಇಲಾಖೆ ಸಹಯೋಗದಲ್ಲಿ ಶನಿವಾರ ಆಯೋಜಿಸಲಾಗಿದ್ದ ಮೂರು ದಿನಗಳ ಕರ್ನಾಟಕ ಏಕೀಕರಣ ಚಳವಳಿ ಐತಿಹಾಸಿಕ ದಾಖಲೆಗಳ ಮತ್ತು ಛಾಯಾಚಿತ್ರಗಳ ಪ್ರದರ್ಶನವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಪತ್ರಾಗಾರ ಇಲಾಖೆ ನಿರ್ದೇಶಕ ಗವಿಸಿದ್ದಯ್ಯ, ಹುಲಕೋಟಿಯ ಕೆ.ಎಚ್. ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಶಿವಪ್ಪ ಕುರಿ, ಧಾರವಾಡ ಪ್ರಾದೇಶಿಕ ಪತ್ರಾಗಾರ ಇಲಾಖೆ ಹಿರಿಯ ಸಹಾಯಕ ನಿರ್ದೇಶಕಿ ಮಂಜುಳಾ ಯಲಿಗಾರ, ತಹಶೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಎ. ರಡ್ಡೇರ, ಅಪ್ಪಣ್ಣ ಹಂಜೆ, ಜೆ.ಕೆ. ಜಮಾದಾರ, ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳಿದ್ದರು.

ಛಾಯಾಚಿತ್ರ ಪ್ರದರ್ಶನದಲ್ಲಿ ಕರ್ನಾಟಕದ ಬಗ್ಗೆ ಪ್ರಮುಖರ ಅಭಿಪ್ರಾಯ, ಕರ್ನಾಟಕ ಪ್ರಾಂತ್ಯ ರಚನೆಗೆ ನೆಹರೂರವರ ಬೆಂಬಲ, ಮುಂಬಯಿ ಶಾಸನ ಸಭೆಯಲ್ಲಿ ಕನ್ನಡ ಸದಸ್ಯರ ಗೈರು ಹಾಜರಿ, ಉಳುವವನಿಗೆ ಭೂಮಿ ಕೊಡಿಸುವ ಮಸೂದೆ ಪರಿಶೀಲನೆ, ಕರ್ನಾಟಕ ಕೀರ್ತಿ ಸ್ತಂಭ, ನವಭಾರತ- ಶಾಂತಿ ಮಾರ್ಗದಿಂದಲೇ ಏಕೀಕರಣ ಸಾಧನೆಯಾಗಬೇಕು. ಮುಂಬಯಿ ಕನ್ನಡ ಶಾಲೆಯ ನೂತನ ಕಟ್ಟಡ, ಸರದಾರ ವೀರನಗೌಡರು ನಾಗಮ್ಮನವರಿಗೆ ಬೆಳಗಾವಿ ಸೆಂಟ್ರಲ್ ಜೈಲಿನಿಂದ ಬರೆದ ಪತ್ರ, ಕೋರ್ಟ್‌ಗಳಲ್ಲಿ ಕನ್ನಡ, ಕರ್ನಾಟಕ ವಿದ್ಯಾವರ್ಧಕ ಸಂಘ, ಧಾರವಾಡ, ನವಭಾರತ-ಕರ್ನಾಟಕ ಪ್ರಾಂತ್ಯ ರಚನೆ, ಕನ್ನಡದ ಉತ್ಸವ, ಬಿಜಾಪೂರ ನ್ಯಾಯಾಲಕ್ಕೆ ಬಾಬಾಸಾಹೇಬರ ಅವಿಸ್ಮರಣೀಯ ಭೇಟಿ ಸೇರಿದಂತೆ ಇನ್ನೂ ಅನೇಕ ಐತಿಹಾಸಿಕ ಘಟನೆಗಳ ಕುರಿತ ಛಾಯಾಚಿತ್ರ ಪ್ರದರ್ಶಿಸಲಾಯಿತು.



**ಗದಗ: ಹುಲಕೋಟಿಯ ಕೆ.ಎಚ್. ಪಾಟೀಲ ಕಾಲೇಜಿನಲ್ಲಿ ಜರುಗಿದ ಕರ್ನಾಟಕ ಏಕೀಕರಣ ಚಳವಳಿ ಐತಿಹಾಸಿಕ ದಾಖಲೆ ಮತ್ತು ಛಾಯಾಚಿತ್ರಗಳ ಪ್ರದರ್ಶನವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಗಣ್ಯರು ವೀಕ್ಷಿಸಿದರು.**